**ಪ್ರಧಾನ ನ್ಯಾಯಿಕ ದಂಡಾಧಿಕಾರಿ ಮತ್ತು ಜೆ.ಎಂ.ಎಫ್.ಸಿ.**
**ನ್ಯಾಯಾಲಯ ಮಾಗಡಿ**

## ಕ್ರಿಮಿನಲ್ ಪ್ರಕರಣ ಸಂಖ್ಯೆ : 17 /2016

**ಚಾಸಾ :- 07 / ಪ್ರಾಸಾ :- 06**

| | |
|---|---|
| ಹೆಸರು | ಚಂದ್ರು |
| ತಂದೆ ಹೆಸರು | ತಿರುಮಲಯ್ಯ |
| ವಯಸ್ಸು | 44 |
| ಉದ್ಯೋಗ | ಏನೂ ಇಲ್ಲ |
| ವಿಳಾಸ | ಜಾಣಗೆರೆ |

ದಿನಾಂಕ: **24.08.2024** ರಂದು ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆ :- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ :-**

ಈಗ ಸಾಕ್ಷಿಗೆ ನಿಪಿ-4 ಅನ್ನು ತೋರಿಸಲಾಗಿ ಅದರಲ್ಲಿರುವ ತಮ್ಮ ಸಹಿಯನ್ನು ನೋಡಿ ಗುರುತಿಸಿದ್ದರಿಂದ ಸಾಕ್ಷಿಯ ಸಹಿಯನ್ನು ನಿಪಿ-4(ಬಿ) ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ನಾನು ಯಾವ ಕಾರಣಕ್ಕಾಗಿ ಮಾಡಿರುತ್ತೇನೆ ಎಂದು ಗೊತ್ತಿರುವುದಿಲ್ಲ. ಪೋಲಿಸರು ಸಹಿ ಮಾಡಲು ಹೇಳಿದ್ದರಿಂದ ಸಹಿ ಮಾಡಿರುತ್ತೇನೆ.

**ಈ ಹಂತದಲ್ಲಿ ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರು ಸಾಕ್ಷಿಯು ಪ್ರತಿಕೂಲ ಸಾಕ್ಷಿಯೆಂದು ಪರಿಗಣಿಸಿ, ಪಾಟೀ ಸವಾಲು ಮಾಡಲು ಅನುಮತಿ ಕೋರಿದ್ದು, ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕರ ಮನವಿಯನ್ನು ಪುರಸ್ಕರಿಸಿ, ಪಾಟೀ ಸವಾಲು ಮಾಡಲು ಅನುಮತಿ ನೀಡಲಾಯಿತು.**

**ಪಾಟೀ ಸವಾಲು ಃ- ಮಾನ್ಯ ಸರ್ಕಾರಿ ಸಹಾಯಕ ಅಭಿಯೋಜಕ ರವರಿಂದ ಃ-**

ದಿನಾಂಕ 25.04.2013 ರಂದು ವೃತ್ತನಿರೀಕ್ಷಕರು ಮಾಗಡಿ ಪೋಲಿಸ್ ಠಾಣೆಯವರು ಠಾಣ ಮೊಕದ್ದಮೆ ನಂ .126/2013 ರ ಕೇಸಿನಲ್ಲಿ ಸ್ಥಳ ತನಿಖೆಗಾಗಿ ಬಂದಿದ್ದರು ಎಂದರೆ ಸಾಕ್ಷಿ ಗೊತ್ತಿರುವುದಿಲ್ಲ ಎಂದು ನುಡಿಯುತ್ತಾರೆ. ಕೇಸಿನ ವಿಚಾರವನ್ನು ನಮಗೆ ತಿಳಿಸಿ ಸಾಕ್ಷಿದಾರರಾದ ರಂಗಸ್ವಾಮಿರವರು ಸ್ಥಳದಲ್ಲಿ ಹಾಜರಿದ್ದು ಬೆದರಿಕೆ ಹಾಕಿದ ಜಾಗ ಇದೆ ಎಂದು ತೋರಿಸಿದ್ದರು ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ನನ್ನ ಮತ್ತು ಚಾಸಾ-2 ಮತ್ತು 6 ರವರ ಸಮಕ್ಷಮ ಬೆಳಿಗ್ಗೆ 11.00 ರಿಂದ 11.30 ಗಂಟೆಯವರೆಗೆ ಸದರಿ ಸ್ಥಳದ ಪಂಚನಾಮೆಯನ್ನು ಜರುಗಿಸಿರುತ್ತಾರೆ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ. ಈ ಪ್ರಕರಣದ ಬಗ್ಗೆ ಎಲ್ಲಾ ಮಾಹಿತಿ ಗೊತ್ತಿದ್ದರೂ ಆರೋಗಪಿ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ಹೇಳುತ್ತಿದ್ದೀರಿ ಎಂದರೆ ಸಾಕ್ಷಿ ಇಲ್ಲ ಎಂದು ನುಡಿಯುತ್ತಾರೆ.

**ಪಾಟೀ ಸವಾಲು** ಃ- **ಆರೋಪಿಗಳ** ಪರ ವಕೀಲರಿಂದ ಃ-

ಆರೋಪಿ ಪರ ವಕೀಲರು ಪಾಟೀಸವಾಲುಇರುವುದಿಲ್ಲ ಎಂದು ಹೇಳಿರುತ್ತಾರೆ.

**ಮರು ವಿಚಾರಣೆ ಇರುವುದಿಲ್ಲ.**

**ಓ. ಹೇ. ಕೇ. ಸ. ಇ. ಎ. ಓಪ್ಪಿರುತ್ತಾರೆ,**

**ಪ್ರ. ನ್ಯಾ. ದಂ. ಮತ್ತು ಜೆ. ಎಂ. ಎಫ್?ಸಿ. ಮಾಗಡಿ.**